ಓ.ಎಸ್.ನಂ :**206/2019**
ಪಿ ಡಬ್ಲ್ಯು-1

ದಿ.26.03.2021 ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿಪರ ಶ್ರೀ ಬಿ.ಟಿ.ಎಂ. ವಕೀಲರಿಂದ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದ, ವಿಚಾರಗಳನ್ನು ಸತ್ಯಾಪನೆಯ ರೂಪದಲ್ಲಿ ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ ಹಾಗೂ ಅದರಲ್ಲಿರುವ ಸಹಿ ನನ್ನದಾಗಿರುತ್ತದೆ.

ದಿನಾಂಕ.23.06.1997 ರ ಎರಡು ಪುಟದ ಅಧೀಕೃತ ಜ್ಞಾಪನ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.-1 ಎಂದು, ದಿನಾಂಕ.29.09.1997 ರಂದು ತಹಶೀಲ್ದಾರ್ ರವರು ನೀಡಿದ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.-2 ಎಂದು, ದಾವಾ ಸ್ವತ್ತಿಗೆ ಸಂಬಂಧಿಸಿದ ಇ-ಖಾತಾವನ್ನು ಹಾಜರುಪಸಿಡಿದ್ದು ಅದನ್ನು ನಿ.ಪಿ.-3 ಎಂದು, ಸರ್ವೆ ನಂಬರ್ 281/1 ಎಬಿ ಯ ಸಂಬಂಧಪಟ್ಟ ಹಿಸ್ಸಾ ಸರ್ವೆ ಬಾಬ್ತು ಕ್ಷೇತ್ರ ನಕಾಶೆಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.-4 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದು ಆಲಿಸಿ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ. ಸರಿಯಿದೆ.

ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ಚಳ್ಳಕೆರೆ.